ಕರ್ನಾಟಕ ಸರ್ಕಾರ

ಡಿಸೆಂಬರ್ 27, 2016

# ಅಕ್ರಮ–ಸಕ್ರಮ ಯೋಜನೆಯಲ್ಲಿ ಶುಲ್ಕದ ಪ್ರಮಾಣ ಕಡಿಮೆ ಮಾಡಲು ಸಚಿವ ಸಂಪುಟ ನಿರ್ಧಾರ

**ಬೆಂಗಳೂರು, ಡಿಸೆಂಬರ್ 27:**

ಅಕ್ರಮ–ಸಕ್ರಮ ಯೋಜನೆಯಲ್ಲಿ ವಿಧಿಸಿರುವ ಶುಲ್ಕದ ಪ್ರಮಾಣವನ್ನು ಕಡಿಮೆ ಮಾಡಲು ರಾಜ್ಯ ಸಚಿವ ಸಂಪುಟವು ನಿರ್ಧರಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಮಂಗಳವಾರ ಇಲ್ಲಿ ನಡೆದ ಸಚಿವ ಸಂಪುಟದ ಸಭೆಯ ಬಳಿಕ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯವನ್ನು ಬಹಿರಂಗಪಡಿಸಿದ ಸಣ್ಣ ನೀರಾವರಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಟಿ. ಬಿ. ಜಯಚಂದ್ರ ಅವರು ಗ್ರಾಮೀಣ ಮತ್ತು ನಗರ ಪ್ರದೇಶದ ಸರ್ಕಾರಿ ಜಮೀನಿನಲ್ಲಿ ಅಕ್ರಮವಾಗಿ ಮನೆ ನಿರ್ಮಿಸಿ ಅದರಲ್ಲಿ ವಾಸವಾಗಿರುವವರಿಗೆ ಸಕ್ರಮ ಮಾಡಿ ಕೊಡಲು ಅನುವಾಗುವಂತೆ ತಂದ ಕರ್ನಾಟಕ ಭೂ ಕಂದಾಯ ಕಾಯಿದೆಯ ಪರಿಚ್ಛೇಧ 94 (ಸಿ) ಮತ್ತು 94 (ಸಿ ಸಿ) ಗೆ ತಿದ್ದುಪಡಿಯಲ್ಲಿ ಸಕ್ರಮ ಮಾಡಿಕೊಳ್ಳಲು ಪ್ರಸ್ತುತ ವಿಧಿಸಲಾಗಿರುವ ಮೊತ್ತದ ಪ್ರಮಾಣವು ದುಬಾರಿ ಎಂದು ಭಾವಿಸಿದ ಸಚಿವ ಸಂಪುಟದ ಉಪ ಸಮಿತಿಯ ಶಿಫಾರಸ್ಸನ್ನು ಪರಿಗಣಿಸಿ ರಾಜ್ಯ ಸಚಿವ ಸಂಪುಟವು ಈ ತೀರ್ಮಾನವನ್ನು ಕೈಗೊಂಡಿದೆ ಎಂದರು.

ಗ್ರಾಮೀಣ ಪ್ರದೇಶದಲ್ಲಿ 30 X 40, 40 X 60 ಹಾಗೂ 50 X 80 ವಿಸ್ತೀರ್ಣದ ನಿವೇಶನದಲ್ಲಿ ನಿರ್ಮಿಸಿದ ಮನೆಗಳಿಗೆ ಈ ಮೊದಲು ವಿಧಿಸಲಾಗಿದ್ದ ಸಕ್ರಮದ ಒಟ್ಟಾರೆ ಶುಲ್ಕವನ್ನು 2,000 ರೂ ನಿಂದ 1,000 ರೂ ಗಳಿಗೆ, 4,000 ರೂ ನಿಂದ 2,000 ರೂ ಗಳಿಗೆ ಹಾಗೂ 8,000 ರೂ ನಿಂದ 3,000 ರೂ ಗಳಿಗೆ ಕಡಿಮೆ ಮಾಡಲು ಸಂಪುಟವು ಅನುಮೋದನೆ ನೀಡಿದೆ. ಅದೇ ರೀತಿ, ನಗರ ಪ್ರದೇಶದಲ್ಲಿ 20X30 ವಿಸ್ತೀರ್ಣದ ನಿವೇಶದಲ್ಲಿ ನಿರ್ಮಿಸಿರುವ ಮನೆಗಳಿಗೆ ಸಕ್ರಮದ ಶುಲ್ಕವನ್ನು 10,000 ರೂ. ನಿಂದ 5,000 ರೂ.ಗಳಿಗೆ ಇಳಿಕೆ ಮಾಡಲು ಸಂಪುಟ ಒಪ್ಪಿಗೆ ನೀಡಿದೆ. ಅಂತೆಯೇ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ವಿಶೇಷ ಚೇತನರಿಗೆ ಈ ಮೊತ್ತದ ಅರ್ಧದಷ್ಟು ಅಂದರೆ ಶೇಕಡಾ 50 ರಷ್ಟು ರಿಯಾಯಿತಿ ನೀಡಿ 2,500 ರೂ ಶುಲ್ಕ ವಿಧಿಸಿ ಸಕ್ರಮ ಮಾಡಿ ಕೊಡಲು ಸಂಪುಟವು ಅನುಮೋದನೆ ನೀಡಿದೆ ಎಂದು ಸಚಿವರು ವಿವರಿಸಿದರು.

## ರಾಜ್ಯ ಸರ್ಕಾರದಿಂದ ತೊಗರಿಗೆ 450 ರೂ ಪ್ರೋತ್ಸಾಹ ಧನ

ಕಲಬುರಗಿ, ಯಾದಗಿರಿ, ಬೀದರ್ ಮತ್ತು ರಾಯಚೂರು ಜಿಲ್ಲೆಗಳಲ್ಲಿ ಬಂಪರ್ ತೊಗರಿ ಬೆಳೆಯಾಗಿರುವ ಹಾಗೂ ಮಾರುಕಟ್ಟೆಯಲ್ಲಿ ತೊಗರಿ ದರ ಕಡಿಮೆಯಾಗಿರುವ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ 5050 ರೂ ಜೊತೆಗೆ ರಾಜ್ಯ ಸರ್ಕಾರದ 450 ರೂ. ಪ್ರೋತ್ಸಾಹ ಧನ ನೀಡಿ ಪ್ರತಿ ಕ್ವಿಂಟಾಲ್ ತೊಗರಿಗೆ 5,500 ರೂ ಮೊತ್ತ ನೀಡಿ ಖರೀದಿಸಲು ಸಂಪುಟ ತೀರ್ಮಾನಿಸಿದೆ. ಭಾರತದ ಆಹಾರ ನಿಗಮ ಮತ್ತು ಭಾರತೀಯ ರಾಷ್ಟ್ರೀಯ ಕೃಷಿ ಸಹಕಾರಿ ಒಕ್ಕೂಟ ( ನ್ಯಾಫೆಡ್ ) ಈ ನಾಲ್ಕೂ ಜಿಲ್ಲೆಗಳಲ್ಲಿ ತೊಗರಿಯನ್ನು ರೈತರಿಂದ ನೇರವಾಗಿ ಖರೀದಿಸಲು ಈಗಾಗಲೇ ಖರೀದಿ ಕೇಂದ್ರಗಳನ್ನು ಪ್ರಾರಂಭಿಸಿದೆ. ಇದಕ್ಕಾಗಿ 100 ಕೋಟಿ ರೂ. ಮೀಸಲಿರಿಸಲಾಗಿದೆ.

ಈ ಮೊತ್ತವನ್ನು ರೈತರಿಗೆ ನೇರವಾಗಿ ಪಾವತಿ ಮಾಡಲು ಯೋಜಿಸಲಾಗಿದೆ. ಅಲ್ಲದೆ, ಮಾರುಕಟ್ಟೆಯಲ್ಲಿ ತೊಗರಿ ಬೇಳೆಯ ದರ ಹೆಚ್ಚಾಗಿರುವುದರಿಂದ ಕರ್ನಾಟಕ ರಾಜ್ಯ ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ಮೂಲಕವೂ ತೊಗರಿಯನ್ನು ಖರೀದಿಸಿ ಸಾರ್ವಜನಿಕ ವಿತರಣಾ ವ್ಯವಸ್ಥೆಯ ಮೂಲಕ ಗ್ರಾಹಕರಿಗೆ ವಿತರಿಸಲು ಸಂಪುಟ ಸಮ್ಮತಿಸಿದೆ ಎಂದು ಜಯಚಂದ್ರ ತಿಳಿಸಿದರು.

ಕಾರವಾರದ ಜಿಲ್ಲಾ ಆಡಳಿತ ಸಂಕೀರ್ಣ ನಿರ್ಮಾಣ ಮಾಡಲು ರಾಜ್ಯ ಸಚಿವ ಸಂಪುಟವು 25 ಕೋಟಿ ರೂ ಅಂದಾಜು ಮೊತ್ತಕ್ಕೆ ಅನುಮೋದನೆ ನೀಡಿದೆ.

ಗದಗ ಜಿಲ್ಲೆಯ ನರಗುಂದದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನ ಕಟ್ಟಡವನ್ನು 58 ಕೋಟಿ ರೂ.ಗಳಲ್ಲಿ ನಿರ್ಮಿಸಲು ಆಡಳಿತಾತ್ಮಕ ಅನುಮತಿ ನೀಡಲಾಗಿದೆ. ಇದಕ್ಕೆ ಕೇಂದ್ರ ಸರ್ಕಾರವು 7.8 ಕೋಟಿ ರೂ ಹಾಗೂ ರಾಜ್ಯ ಸರ್ಕಾರವು 5.2 ಕೋಟಿ ರೂ. ಅನುದಾನವನ್ನು ನೀಡಲಿದೆ ಎಂದರು. ಅಂತೆಯೇ, ಮೈಸೂರಿನ ಕಡಕೋಳ, ಮುದಕಿ ಜಕ್ಕೂರು ಪ್ರದೇಶದಲ್ಲಿ ವಾಸವಾಗಿರುವ ಜನರಿಗೆ ಕುಡಿಯುವ ನೀರು ಕಲ್ಪಿಸಲು 18.99 ಕೋಟಿ ರೂ. ವೆಚ್ಚದಲ್ಲಿ ಬಹು ಗ್ರಾಮ ಕುಡಿಯುವ ನೀರು ಯೋಜನೆಗೆ ಸಚಿವ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ.

ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ಸುತ್ತಮುತ್ತಲಿನ ಕೆರೆ-ಬಾಂದಾರ್‌ಗಳಿಗೆ ಕಾಳಿ ನದಿಯಿಂದ ನೀರು ತುಂಬಿಸುವ ಯೋಜನೆಗೆ ಸಂಪುಟ ಅನುಮೋದನೆ ನೀಡಿದೆ.

ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಇರುವ ವೈದ್ಯಕೀಯ ಉಪಕರಣಗಳ ಸಮರ್ಥ ಬಳಕೆಗೆ ಸಿಬ್ಬಂದಿ ಕೊರತೆ ಇರುವ ಹಿನ್ನೆಲೆಯಲ್ಲಿ ಹೊರಗುತ್ತಿಗೆ ಆಧಾರದ ಮೇರೆಗೆ ನಿರ್ವಹಣೆ ಮಾಡಲು ರಾಜ್ಯ ಸಚಿವ ಸಂಪುಟ ಅನುಮತಿ ನೀಡಿದೆ. ರಾಷ್ಟ್ರೀಯ ಆರೋಗ್ಯ ಅಭಿಯಾನ ಯೋಜನೆಯಡಿ ರಾಜ್ಯ ಸರ್ಕಾರದ ಅಧೀನದಲ್ಲಿ ಬರುವ ವಿವಿಧ ಆಸ್ಪತ್ರೆಗಳಲ್ಲಿನ ಜೈವಿಕ ಉಪಕರಣಗಳ ನಿರ್ವಹಣೆ ಮಾಡಲು ಕೇಂದ್ರದ 53.96 ಕೋಟಿ ರೂ. ಅನುದಾನವನ್ನು ಬಳಸಿಕೊಳ್ಳಲು ಸಂಪುಟವು ಆಡಳಿತಾತ್ಮಕ ಅನುಮೋದನೆ ನೀಡಿದೆ.

ಕಲಬುರಗಿ ಜಿಲ್ಲಾ ಆಸ್ಪತ್ರೆಯಲ್ಲಿ ತಾಯಿ ಮತ್ತು ಮಕ್ಕಳ ಆಸ್ಪತ್ರೆಯನ್ನು 15.82 ಕೋಟಿ ರೂ. ವೆಚ್ಚದಲ್ಲಿ ಆರಂಭಿಸಲು ಸಂಪುಟ ಅನುಮತಿ ನೀಡಿದೆ.

ರಾಯಚೂರಿನಲ್ಲಿರುವ ರಾಜೀವ್ ಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಲು 11 ಕೋಟಿ ರೂ. ವೆಚ್ಚದಲ್ಲಿ ಎರಡನೇ ಹಂತದ ಕಾಮಗಾರಿಗಳ ಅನುಷ್ಠಾನಕ್ಕೆ ಸಚಿವ ಸಂಪುಟ ಸಮ್ಮತಿಸಿದೆ.

ರಾಜ್ಯದಲ್ಲಿರುವ 37 ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ( ಐ ಟಿ ಐ ) ಗಳಲ್ಲಿ ವಿಶೇಷ ಅಭಿವೃದ್ಧಿ ಯೋಜನೆಯಡಿ ಕೌಶಲ್ಯ ಅಭಿವೃದ್ಧಿ ಹಾಗೂ ಮೂಲ ಸೌಕರ್ಯ ಒದಗಿಸಲು ಒಟ್ಟು 28 ಕೋಟಿ ರೂ. ವೆಚ್ಚ ಮಾಡಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ ಎಂದು ಸಚಿವರು ಹೇಳಿದರು.

ದಾವಣಗೆರೆ, ಚಿತ್ರದುರ್ಗ, ಶಿವಮೊಗ್ಗದ ತುಂಗಾ ನದಿಯಿಂದ 9.89 ಟಿ ಎಂ ಸಿ ನೀರನ್ನು 121 ಕೆರೆಗಳಿಗೆ ತುಂಬಿಸಲು 415.65 ಕೋಟಿ ರೂ. ಯೋಜನೆಗೆ ರಾಜ್ಯ ಸಚಿವ ಸಂಪುಟವು ಆಡಳಿತಾತ್ಮಕ ಅನುಮೋದನೆ ನೀಡಿದೆ.

ಶಿವಮೊಗ್ಗ ಜಿಲ್ಲೆಯ ನಿದಿಗೆ ಹೋಬಳಿ ಬಳಿ ಸಂತೆ ಕಡೂರು ಗ್ರಾಮದಲ್ಲಿರುವ ರಾಜ್ಯ ಸರ್ಕಾರದ 7.04 ಎಕರೆ ಭೂಮಿಯನ್ನು ಕಾರ್ಯಾಗಾರ ಹಾಗೂ ವಿಭಾಗೀಯ ಕಚೇರಿಗಾಗಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗೆ ಉಚಿತವಾಗಿ ಮಂಜೂರು ಮಾಡಲು ಸಂಪುಟ ಸಮ್ಮತಿಸಿದೆ.

ಬಂಗಾರುಪೇಟೆ ತಾಲ್ಲೂಕಿನ ಗಿಡ್ಡೆಗೌಡನ ಹಳ್ಳಿ ಗ್ರಾಮದಲ್ಲಿ ಇರುವ 2 ಎಕರೆ ಸರ್ಕಾರಿ ಗೋಮಾಳ ಜಮೀನನ್ನು ಪವರ್ ಲೂಮ್ ಪಾರ್ಕ್‌ನ್ನು ಸ್ಥಾಪಿಸಲು ಕೆ. ಜಿ. ಎಫ್ ಪವರ್ ಲೂಮ್ ಪಾರ್ಕ್ ಪ್ರೈವೇಟ್ ಲಿಮಿಟೆಡ್‌ಗೆ ನೀಡಲು ಸಂಪುಟ ಅನುಮೋದಿಸಿದೆ.

ರಾಜ್ಯದಲ್ಲಿ ಬರ ಪರಿಸ್ಥಿತಿ ಕುರಿತಂತೆ ನಾಲ್ಕು ಉಪ ಸಮಿತಿಗಳು ನೀಡಿರುವ ಬರ ಅಧ್ಯಯನದ ವರದಿ ಕುರಿತಂತೆ ಮುಖ್ಯ ಕಾರ್ಯದರ್ಶಿ ಅವರ ನೇತೃತ್ವದ ಸಮಿತಿಯು ಅಧ್ಯಯನಿಸಿ ಸಂಪುಟದ ಮುಂದೆ ಸವಿವರ ವರದಿಯನ್ನು ಮಂಡಿಸಲು ಸಂಪುಟವು ಸೂಚಿಸಿದೆ ಎಂದು ಜಯಚಂದ್ರ ಅವರು ಮಾಹಿತಿ ನೀಡಿದರು.

********

ಡಿ ಪಿ ಎಂ